ಜಿಲ್ಲಾಸ್ಪತ್ರೆ ನಿರ್ಮಾಣ

860(361); ಶ್ರೀ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲಾ ಕೇಂದ್ರವಾಗಿ 4 ವರ್ಷಗಳೇ ಕಳೆದರೂ ಜಿಲ್ಲಾ ಮಟ್ಟದ ಆಸ್ಪತ್ರೆ ನಿರ್ಮಾಣವಾಗದೇ ಜಿಲ್ಲೆಯ ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಜಿಲ್ಲಾ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ಶೀಘ್ರ ಚಾಲನೆ ನೀಡಲಾಗುವುದೇ:

ಇ) ಆಸ್ಪತ್ರೆ ನಿರ್ಮಾಣಕ್ಕೆ ಅಗತ್ಯ ಭೂಮಿ ಖರೀದಿಸಲು ಹಾಗೂ ಕಟ್ಟಡ ನಿರ್ಮಿಸಲು ಸರ್ಕಾರ ಜಿಲ್ಲಾಡಳಿತಕ್ಕೆ ಹಣ ಬಿಡುಗಡೆ ಮಾಡಿದೆಯೇ:

ಈ) ಆಸ್ಪತ್ರೆ ವಿಳಂಬವಾದಲ್ಲಿ ನಿರ್ಮಾಣಕ್ಕೆ ನಿಗದಿಪಡಿಸಿದ ಹಣ ಹಿಂದಿರುಗಿಸಿದರೆ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೇ?

ಶ್ರೀ ಯು.ಟಿ.ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಜಿಲ್ಲಾ ಆಸ್ಪತ್ರೆಯ ಕಟ್ಟಡ ನಿವೇಶನದ ಲಭ್ಯತೆಯ ಬಗ್ಗೆ ಆರ್ಥಿಕ ಇಲಾಖೆ ನೀಡಿದ ಅಭಿಪ್ರಾಯದ ಅನ್ವಯ ಕಂದಾಯ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.

ಇ) ಜಿಲ್ಲಾ ಆಸ್ಪತ್ರೆಗಾಗಿ ಪ್ರಸ್ತುತ ಸಾಲಿನಲ್ಲಿ ಎನ್.ಆರ್.ಹೆಚ್.ಎಂ. ಅನುದಾನದಲ್ಲಿ ₹ 330.00 ಲಕ್ಷಗಳ ಮೊತ್ತವನ್ನು ಕಾಯ್ದಿರಿಸಲಾಗಿರುತ್ತದೆ.

ಈ) ಸೂಕ್ತ ನಿವೇಶನ ಲಭ್ಯವಾದ ಕೂಡಲೇ ಅನುದಾನದ ಕೊರತೆಯಾಗದಂತೆ ಕ್ರಮ ವಹಿಸಲಾಗುವುದು.